# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೈಸೂರು ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಸಾಮಾಜಿಕ ಅರಣ್ಯ ಇಲಾಖೆಯಲ್ಲಿ ನಿವೃತ್ತರಾಗಿರುವ ಅರಣ್ಯ ರಕ್ಷಕರ ವೇತನವನ್ನು ಪುನರ್ ನಿಗದಿಪಡಿಸಿರುವುದರಿಂದ ನಿವೃತ್ತಿ ಬಾಕಿಯನ್ನು ಪಾವತಿಸಲು ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ವೆಚ್ಚ 5 ಶಾಖೆಯ ಕಡತ ಸಂಖ್ಯೆ: ಆಇ 419 ವೆಚ್ಚ 5/2020 (ಇ)

**ಪ್ರಸ್ತಾವನೆ:**

ಮೈಸೂರು ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಸಾಮಾಜಿಕ ಅರಣ್ಯ ಇಲಾಖೆಯಲ್ಲಿ ಅರಣ್ಯ ರಕ್ಷಕರಾಗಿ ಕರ್ತವ್ಯ ನಿರ್ವಹಿಸಿ ಪ್ರಸ್ತುತ ನಿವೃತ್ತರಾಗಿರುವ ಶ್ರೀ ವಿ. ಮಹದೇವಯ್ಯ ಇವರ ವೇತನವನ್ನು ಪುನರ್ ನಿಗದಿಪಡಿಸಿರುವುದರಿಂದ ಬಾಕಿ ವೇತನ, ಗಳಿಕೆ ರಜೆ ನಗದೀಕರಣಕ್ಕಾಗಿ ರೂ.3.26ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2406–00–101–0–26–005ರಡಿ ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಲಾಗಿದೆ.

ನಿವೃತ್ತ ಸಿಬ್ಬಂದಿಯವರ ಬಾಕಿ ವೇತನ ಮತ್ತಿತರೆ ನಿವೃತ್ತಿ ಸೌಲಭ್ಯ ಪಾವತಿಸಲು ಕೋರಿರುವ ರೂ.3.26ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515–00–196–1–05–300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ. .

## ಸರ್ಕಾರದ ಆದೇಶ ಸಂಖ್ಯೆ: ಆಇ 376 ವೆಚ್ಚ 6/2020(ಇ) ದಿನಾಂಕ: 12ನೇ ಅಕ್ಟೋಬರ್ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ಕಾಲಂ 5ರ ಒಟ್ಟು ರೂ.3.26ಲಕ್ಷ (ರೂಪಾಯಿ ಮೂರು ಲಕ್ಷದ ಇಪ್ಪತ್ತಾರು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು. (ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ–2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

(ರೂ.ಲಕ್ಷಗಳಲ್ಲಿ)

| ಕ್ರಮ ಸಂಖ್ಯೆ | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515–00–196–1–05–300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು |
|---|---|---|---|---|
| | | | 4 | 5 |
| 1 | 2 | 3 | 3.26 | 3.26 |
| 1 | ಮೈಸೂರು | 2406–00–101–0–26–005 | **3.26** | **3.26** |
| | ಒಟ್ಟು | | | |

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

1415140128
11.10.20

ಈ ರೀತಿ ಬಿಡುಗಡೆಗೊಳಿಸಿದ ಅನುದಾನದಲ್ಲಿ ಕಾಲಂ 2ರಡಿ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಯವರುಗಳ ಬಾಕಿ ವೇತನ ವೆಚ್ಚವನ್ನು ಸೆಳೆಯಲು ಖಜಾನೆ-2ರಲ್ಲಿ ಲಭ್ಯಪಡಿಸುವಂತೆ ಹೆಚ್.ಆರ್.ಎಂ.ಎಸ್.ಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳುರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಅರಣ್ಯ ಇಲಾಖೆ
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-3
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಮೈಸೂರು
6. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
7. ಜಿಲ್ಲಾ ಖಜಾನಾಧಿಕಾರಿಗಳು, ಮೈಸೂರು
8. ಆರ್ಥಿಕ ಇಲಾಖೆ ವೆಚ್ಚ 3 ಶಾಖೆ ಕಡತಕ್ಕೆ
9. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ